# ಕರ್ನಾಟಕ ಸರ್ಕಾರ ನಡವಳಿಗಳು

ವಿಷಯ : 2019–20ನೇ ಸಾಲಿನಲ್ಲಿ 2018–19ನೇ ಸಾಲಿಗೆ ಸಂಬಂಧಿಸಿದಂತೆ ನವ ರಾಷ್ಟ್ರೀಯ ಜೈವಾನಿಲ ಮತ್ತು ಸಾವಯವ ಗೊಬ್ಬರ ನಿರ್ವಹಣೆ ಕಾರ್ಯಕ್ರಮದಡಿ ಕೇಂದ್ರ ಹಾಗೂ ರಾಜ್ಯ ಸಹಾಯಧನ ವರ್ಗಾಯಿಸುವ ಕುರಿತು.

ಓದಲಾಗಿದೆ :

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿಕ್ಕಮಗಳೂರು ರವರ ಪತ್ರ ಸಂಖ್ಯೆ ಜಿಪಂಚಿ/ಜೈಅಯೋ/ಯೋಅ/1/2018–19, ದಿನಾಂಕ 06.05.2019.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಂಗಳೂರು(ಗ್ರಾ) ರವರ ಪತ್ರ ಸಂಖ್ಯೆ ಬೆಂಗ್ರಾಜಿಪಂ/ಜೈಅಯೋ/ಸಿಆರ್–16/2018–19, ದಿನಾಂಕ 14.05.2019.

ಪ್ರಸ್ತಾವನೆ :

ಮೇಲೆ (1) ಮತ್ತು (2)ರಲ್ಲಿ ಓದಲಾದಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಖಾರಿ, ಜಿಲ್ಲಾ ಪಂಚಾಐತ್, ಚಇಕ್ಕಮಗಳೂರು ಹಾಗೂ ಬೆಂಗಳೂರು(ಗ್ರಾ) ರವರು 2018–19ನೇ ಸಾಲಿನಲ್ಲಿ ನಿಗದಿಪಡಿಸಿದ ಭೌತಿಕ ಗುರಿ, ಸಾಧಿಸಿದ ಪ್ರಗತಿಯನ್ವಯ ನಿರ್ಮಿಸಲಾದ ಅನಿಲ ಸ್ಥಾವರಗಳಿಗೆ ಸಂಬಂಧಿಸಿದಂತೆ ಕೇಂದ್ರ ಹಾಗೂ ರಾಜ್ಯ ಸಹಾಯಧನವನ್ನು ಬಿಡುಗಡೆ ಮಾಡುವಂತೆ ಕೋರಿರುತ್ತಾರೆ.

ಮೇಲಿನ ಜಿಲ್ಲಾ ಪಂಚಾಯತ್‌ಗಳ ಕೋರಿಕೆಯನ್ನು ಪರಿಗಣಿಸಿ ಕೊಡಗು ಜಿಲ್ಲಾ ಪಂಚಾಯತ್‌ನಲ್ಲಿ ಮಾರ್ಚ್ 2019ರ ಅಂತ್ಯದವರೆಗಿನ ಪ್ರಗತಿ ವರದಿಯನ್ವಯ ಕಾರ್ಯಕ್ರಮದಡಿ ವೆಚ್ಚವಾಗದೇ ಉಳಿಕೆಯಾದ ರೂ.34.54ಲಕ್ಷಗಳಲ್ಲಿ ಚಿಕ್ಕಮಗಳೂರು ಜಿಲ್ಲಾ ಪಂಚಾಯತ್‌ಗೆ ರೂ.15.65ಲಕ್ಷ ಕೇಂದ್ರ ಸಹಾಯಧನ ಹಾಗೂ ಬೆಂಗಳೂರು(ಗ್ರಾ) ಜಿಲ್ಲಾ ಪಂಚಾಯತ್‌ಗೆ ರೂ,14.00ಲಕ್ಷ (ಕೇಂದ್ರ ಹಾಗೂ ರಾಜ್ಯ ಸಹಾಯಧನ ಸೇರಿದಂತೆ) ಒಟ್ಟಾರೆ ರೂ.29.65ಲಕ್ಷಗಳನ್ನು ಬಿಡುಗಡೆ ಮಾಡಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:RDPR/07/REP/2019-REP-RDPR SEC ಬೆಂಗಳೂರು,**
**ದಿನಾಂಕ 27.07.2019.**

ಪ್ರಸ್ತಾವನೆಯಲ್ಲಿ ವಿವರಿಸಿದಂತೆ ನವ ರಾಷ್ಟ್ರೀಯ ಜೈವಾನಿಲ ಮತ್ತು ಸಾವಯವ ಗೊಬ್ಬರ ನಿರ್ವಹಣೆ (NNBOMP) ಕಾರ್ಯಕ್ರಮದಡಿ **ಕೊಡಗು** ಜಿಲ್ಲಾ ಪಂಚಾಯತ್ ನಲ್ಲಿ ಉದ್ದೇಶಿತ ಯೋಜನೆಗೆ ವಿನಿಯೋಗವಾಗದೇ ಉಳಿಕೆಯಾದ **ರೂ.34.50ಲಕ್ಷಗಳಲ್ಲಿ 2018–19ನೇ** ಸಾಲಿನಲ್ಲಿ ಕಾರ್ಯಕ್ರಮದಡಿ **ಚಿಕ್ಕಮಗಳೂರು ಮತ್ತು ಬೆಂಗಳೂರು(ಗ್ರಾ)** ಜಿಲ್ಲಾ ಪಂಚಾಯತ್‌ಗಳಲ್ಲಿ ಸಾಧಿಸಿದ ಪ್ರಗತಿಗನುಗುಣವಾಗಿ ಅವಶ್ಯಕತೆ ಇರುವ ಕೇಂದ್ರ, ಹಾಗೂ ರಾಜ್ಯ ಸಹಾಯಧನ ಸೇರಿದಂತೆ **ರೂ.29.65ಲಕ್ಷ**(ಇಪ್ಪತ್ತೊಂಬತ್ತು ಲಕ್ಷದ ಅರವತ್ತೈದು ಸಾವಿರ ರೂಪಾಯಿಗಳು ಮಾತ್ರ)ಗಳನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಡಗು ರವರು ಕೂಡಲೇ PFMS ಮುಖೇನಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, **ಚಿಕ್ಕಮಗಳೂರು ಮತ್ತು ಬೆಂಗಳೂರು(ಗ್ರಾ)** ರವರಿಗೆ ವರ್ಗಾಯಿಸಲು ಕೂಡಲೇ ಕ್ರಮವಹಿಸುವಂತೆ ಆದೇಶಿಸಿದೆ.

PFMS ರಡಿ ವರ್ಗಾಯಿಸಬೇಕಾದ ಬ್ಯಾಂಕ್ ಖಾತೆಯ ವಿವರಗಳ ಕೆಳಕಂಡಂತಿವೆ.

| Sl. No. | District | Name of the A/c holder | Name of the Bank | IFSC Code | Account No. | Amount (Rs. In Lakh) |
|---|---|---|---|---|---|---|
| 1 | Chikkamagalur | Chief Executive Officer | Indian Overseas Bank | IOBA0000838 | 083801000008844 | 15.65 |
| 2 | Bangalore(R) | Bangalore Rural Zilla Panchayath | Corporation bank | CORP0000022 | 520101256956169 | 14.00 |

ಹಾಲಿ ಬಿಡುಗಡೆ ಮಾಡುತ್ತಿರುವ ಅನುದಾನವು ಮಹಾಲೇಖಪಾಲರ ಲೆಕ್ಕ ತಪಾಸಣೆಗೊಳಪಟ್ಟು ಬಿಡುಗಡೆ ಮಾಡಲಾಗುತ್ತಿದ್ದು, ಉದ್ದೇಶಿತ ಕಾರ್ಯಕ್ರಮಕ್ಕಾಗಿ ಮಾತ್ರ ವಿನಿಯೋಗಿಸತಕ್ಕದ್ದು. ಯಾವುದೇ ಕಾರಣಕ್ಕೂ ಅನುದಾನವನ್ನು ಮಾರ್ಗಪಲ್ಲಟ ಮಾಡತಕ್ಕದಲ್ಲ.

ಪ್ರಸ್ತುತ ಬಿಡುಗಡೆ ಮಾಡುತ್ತಿರುವ ಸದರಿ ಅನುದಾನವನ್ನು ಗಾಂಧಿ ಸಾಕ್ಷಿ ಕಾಯಕದಡಿ ಇಂಧೀಕರಿಸುವುದು ಹಾಗೂ **PFMS** ತಂತ್ರಾಂಶದಲ್ಲೇ ಬಿಡುಗಡೆ ಮಾಡಲು ಕ್ರಮವಹಿಸತಕ್ಕದ್ದು. ಹಾಲಿ ಬಿಡುಗಡೆ ಮಾಡುತ್ತಿರುವ ಅನುದಾನವನ್ನು ಲೆಕ್ಕ ಶೀರ್ಷಿಕೆ **2810-60-196-6-01**ರಡಿ ವೆಚ್ಚ ಭರಿಸಿ, ನಿಗದಿತ ನಮೂನೆಯಲ್ಲಿ ಹಣಬಳಕೆ ಪ್ರಮಾಣ ಪತ್ರವನ್ನು ಸರ್ಕಾರಕ್ಕೆ ನೀಡುವುದು.

ಹಾಲಿ ಬಿಡುಗಡೆ ಮಾಡುತ್ತಿರುವ ಅನುದಾನವನ್ನು ವರ್ಗಾಯಿಸಲು ಹಾಗೂ ಪಡೆಯಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಡಗು, ಚಿಕ್ಕಮಗಳೂರು ಮತ್ತು ಬೆಂಗಳೂರು(ಗ್ರಾ) ಸೂಕ್ತ ಕ್ರಮ ವಹಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಕೆ. ರೇವಣಪ್ಪ)
ನಿರ್ದೇಶಕರು (ಗ್ರಾಮೂಸೌ-2) ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ,

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ಕೊಡಗು, ಚಿಕ್ಕಮಗಳೂರು ಮತ್ತು ಬೆಂಗಳೂರು(ಗ್ರಾ).
3. ವಿಶೇಷ ಅಧಿಕಾರಿಗಳು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಪ್ರತಿಯನ್ನು :

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಸರ್ಕಾರದ ಕಾರ್ಯದರ್ಶಿಗಳು(ಪಂ.ರಾ) ರವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
2. ಅಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
3. ರಕ್ಷಾ ಕಡತಕ್ಕೆ / ಹೆಚ್ಚುವರಿ ಪ್ರತಿಗಳು.